ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಡಿಸಿಇ:ಟಿಆರ್ಎನ್:ಐಎನ್‌ಸಿ:72:2023;ಟಿಡಿಜಿ;

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ:10-10-2023.

## ಸುತ್ತೋಲೆ

ವಿಷಯ: ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಾಂಶುಪಾಲರ ಪ್ರಭಾರ ವಹಿಸುವ ಬಗ್ಗೆ.

*****

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಭಾರ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರುಗಳು ನಿವೃತ್ತಿ, ವರ್ಗಾವಣೆ, ಇತ್ಯಾದಿ ಸಂದರ್ಭದಲ್ಲಿ ಬಿಡುಗಡೆ ಹೊಂದುವಾಗ ಕಾಲೇಜಿನ ಪ್ರಾಂಶುಪಾಲರ ಪ್ರಭಾರವನ್ನು ಇವರ ನಂತರದ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರಿಗೆ ವಹಿಸಲು ಈ ಕಛೇರಿಯಿಂದ ಸೂಚನೆಗಳನ್ನು ನೀಡಿದ್ದರೂ, ಸದರಿ ಸೂಚನೆಗಳನ್ನು ಪಾಲಿಸದೇ ಕಿರಿಯರಿಗೆ ಪ್ರಾಂಶುಪಾಲರ ಪ್ರಭಾರವನ್ನು ವಹಿಸುತ್ತಿರುವುದರಿಂದ ಕಾಲೇಜಿನಲ್ಲಿ ಆಡಳಿತಾತ್ಮಕ ಗೊಂದಲಗಳು ಉಂಟಾಗುತ್ತಿರುವುದನ್ನು ಗಮನಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಪ್ರಭಾರ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರುಗಳು ನಿವೃತ್ತಿ, ವರ್ಗಾವಣೆ, ಇತ್ಯಾದಿ ಸಂದರ್ಭದಲ್ಲಿ ಪ್ರಾಂಶುಪಾಲರ ಪ್ರಭಾರದಿಂದ ಬಿಡುಗಡೆ ಹೊಂದುವಾಗ ಪ್ರಾಂಶುಪಾಲರ ಪ್ರಭಾರವನ್ನು ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರಿಗೆ ಕಡ್ಡಾಯವಾಗಿ ವಹಿಸಲು ಸೂಚಿಸಿದೆ. ಒಂದು ವೇಳೆ ಸದರಿಯವರು ಪ್ರಾಂಶುಪಾಲರ ಪ್ರಭಾರ ವಹಿಸಿಕೊಳ್ಳಲು ನಿರಾಕರಿಸಿದಲ್ಲಿ ಅವರಿಂದ ಲಿಖಿತವಾಗಿ ನಿರಾಕರಣೆಯನ್ನು ಪಡೆದು ನಂತರದ ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರಿಗೆ ವಹಿಸಲು ಸೂಚಿಸಿದೆ.

ಮುಂದುವರೆದು ಪ್ರಸ್ತುತ ಕಾಲೇಜಿನಲ್ಲಿ ಸೇವಾಜೇಷ್ಠತೆಯಲ್ಲಿ ಹಿರಿಯರಾದ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರಿದ್ದರೂ ಸಹ ಕಿರಿಯ ಬೋಧಕರು ಪ್ರಭಾರ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿದ್ದಲ್ಲಿ ಕೂಡಲೇ ಹಿರಿಯ ಪ್ರಾಧ್ಯಾಪಕರು, ಸಹ/ಸಹಾಯಕ ಪ್ರಾಧ್ಯಾಪಕರಿಗೆ ಪ್ರಾಂಶುಪಾಲರ ಪ್ರಭಾರವನ್ನು ವಹಿಸಲು ಸೂಚಿಸಿದೆ.

ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ

**ಇವರಿಗೆ:**

1. ಕಾಲೇಜು ಶಿಕ್ಷಣ ಪ್ರಾದೇಶಿಕ ಕಛೇರಿಗಳ ಜಂಟಿ ನಿರ್ದೇಶಕರುಗಳಿಗೆ-ತಮ್ಮ ವ್ಯಾಪ್ತಿಯ ಸರ್ಕಾರಿ ಕಾಲೇಜುಗಳಲ್ಲಿ ಸೇವಾಜೇಷ್ಠತೆಯಲ್ಲಿ ಹಿರಿಯರಾದ ಪ್ರಾಧ್ಯಾಪಕರು ಸಹ/ಸಹಾಯಕ ಪ್ರಾಧ್ಯಾಪಕರು ಪ್ರಾಂಶುಪಾಲರ ಪ್ರಭಾರವನ್ನು ನಿರ್ವಹಿಸಲು ತಮ್ಮ ಹಂತದಲ್ಲಿಯೇ ಅಗತ್ಯ ಕ್ರಮವಹಿಸುವಂತೆ ಸೂಚಿಸಿದೆ.
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಭಾರಿ ಪ್ರಾಂಶುಪಾಲರುಗಳಿಗೆ-ಅಗತ್ಯಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಇಲಾಖಾ ವೆಬ್‌ಸೈಟ್ ನಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ.

DCE 72 Circular